



ಮಾಜಿ ಮುಖ್ಯಮಂತ್ರಿಗಳು ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಸಚಿವರಾದ ಎಚ್. ಡಿ ಕುಮಾರಸ್ವಾಮಿ ಅವರು ಇಂದು ಸಭಾಪತಿ ಬಸವರಾಜ್ ಹೊರಟ್ಟಿ ಅವರನ್ನು ಭೇಟಿಯಾಗಿ ಕುಶಲೋಪರಿಯನ್ನು ವಿಚಾರಿಸಿ  ತಮ್ಮ ಸಂತಸವನ್ನು ಹಂಚಿಕೊಂಡರು. ಈ ಸಂದರ್ಭದಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ಅವರು ನೂತನ ಕೇಂದ್ರ ಸಚಿವರನ್ನು ಸನ್ಮಾನಿಸಿ ಮಾತನಾಡಿದ ಅವರು ಎರಡು ಬಾರಿ ಮುಖ್ಯಮಂತ್ರಿಗಳಾಗಿ ಸಾಕಷ್ಟು ಅಪಾರ ಅನುಭವ ಹೊಂದಿರುವ ತಾವು ರಾಜ್ಯಕ್ಕೆ ಸಾಕಷ್ಟು ತಮ್ಮದೇ ಆದ ಕೊಡುಗೆಯನ್ನು ನೀಡುವುದರ ಜೊತೆಗೆ ದೇಶಕ್ಕೆ ಒಬ್ಬ ಮಾದರಿ ಮಂತ್ರಿಗಳಾಗಿ ಕೆಲಸ ಮಾಡಿ ಎಂದು ಶುಭ ಕೋರಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಹೆಚ್.ಡಿ ಕುಮಾರಸ್ವಾಮಿ ಅವರು ತಾವು ಮೊದಲ ಬಾರಿ ಮುಖ್ಯಮಂತ್ರಿಗಳಾದಾಗ ಹೊರಟ್ಟಿ ಅವರು ಶಿಕ್ಷಣ ಸಚಿವರಾಗಿ ಮಾಡಿದ ಅಪಾರ ಸೇವೆಯನ್ನು  ಸಾಧನೆಗಳನ್ನ ನೆನಪು ಮಾಡಿಕೊಂಡು ಆ ದಿನಗಳ ಕುರಿತು ಮಾತನಾಡಿದರು. ಮುಂಬರುವ ದಿನಗಳಲ್ಲಿ ಅಂತಹ ದಿನಗಳು ಬರಲಾರವು. ಅವತ್ತು ಪ್ರತಿಯೊಬ್ಬರಿಗೂ ಸಮಾಜಕ್ಕೆ ಏನನ್ನಾದರೂ ಕೊಡಬೇಕೆಂಬ ತುಡಿತ ಹಂಬಲ ಇರುತ್ತಿತ್ತು. ಆದರೆ ಇಂದು ಅಂತಹ ವಾತಾವರಣ ನೋಡಲು ಸಿಗದೇ ಇರುವುದು ವಿಷಾದ ಸಂಗತಿ. ನನಗೆ ಸಿಕ್ಕ ಅವಕಾಶವನ್ನು ಸದುಪಯೋಗ ಮಾಡಿಕೊಂಡು ರಾಜ್ಯಕ್ಕೆ ರಾಷ್ಟ್ರಕ್ಕೆ ಕೀರ್ತಿ ತರುವ ಕೆಲಸವನ್ನು ಮಾಡುತ್ತೇನೆ. ಕನ್ನಡ ನಾಡಿನ ಜನತೆಯ ಮೂಡಿಗೆ ಹೂ ತರುವೆನೇ ಹೊರತು ಹುಲ್ಲು ತರಲಾರೆ. ಆ ಭರವಸೆಯನ್ನು ನನ್ನ ಸಹೋದರ ಸಮಾನರಾದ ಗೌರವಾನ್ವಿತ ಸಭಾಪತಿ ಬಸವರಾಜ ಹೊರಟ್ಟಿ ಅವರಿಗೆ ನೀಡುತ್ತೇನೆ ಎಂದು ಭಾವುಕರಾಗಿ ನುಡಿದರು. ಈ ಸಂದರ್ಭದಲ್ಲಿ ಮಾಜಿ ಸಚಿವರು ಹಿರಿಯ ಶಾಸಕರಾದ ಜಿ.ಟಿ ದೇವೇಗೌಡ, ವಿಧಾನ ಪರಿಷತ್ ಸದಸ್ಯರಾದ ಎಸ್ .ಎಲ್ ಭೋಜೇಗೌಡ ಸೇರಿದಂತೆ ವಿವಿಧ ಗಣ್ಯಮಾನ್ಯರು, ಪರಿಷತ್ ಸಿಬ್ಬಂದಿ ವರ್ಗ ಮುಂತಾದವರು ಉಪಸ್ಥಿತರಿದ್ದರು.